ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಜಂತಕಲ್ ಅಕ್ರಮ ಗಣಿಗಾರಿಕೆ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು):-

560 (581) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣ ಕುರಿತು ವಿಶೇಷ ತನಿಖಾ ತಂಡದಿಂದ ಕ್ರಿಮಿನಲ್ ಪ್ರಕರಣ ದಾಖಲಾಗಿರುವ ಎಷ್ಟು ಐ.ಎ.ಎಸ್. ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಪ್ರಕರಣದಲ್ಲಿ ಭಾಗಿಯಾಗಿರುವ ಐ.ಪಿ.ಎಸ್. ಅಧಿಕಾರಿಗಳ ಸಂಖ್ಯೆ ಎಷ್ಟು ; ಇವರ ಮೇಲೆ ಕ್ರಿಮಿನಲ್ ಪ್ರಕರಣ ಯಾವ ದಿನಾಂಕದಂದು ದಾಖಲಾಗಿದೆ:

(ಆ) ಐ.ಎ.ಎಸ್. ಮತ್ತು ಐ.ಪಿ.ಎಸ್. ಅಧಿಕಾರಿಗಳ ಮೇಲೆ ದಾಖಲಾಗಿರುವ ಕ್ರಿಮಿನಲ್ ಪ್ರಕರಣದ ಕುರಿತು ತನಿಖೆ ನಡೆಸಲು ಅನುಮತಿ ನೀಡಲಾಗಿದೆ; ಅನುಮತಿ ನೀಡುವಂತೆ ಕೋರಿ ವಿಶೇಷ ತನಿಖಾ ತಂಡದಿಂದ ಸರ್ಕಾರಕ್ಕೆ ಎಂದು ಮನವಿ ಸಲ್ಲಿಸಲಾಗಿದೆ; ಇನ್ನು ನೀಡಿಲ್ಲದಿದ್ದಲ್ಲಿ, ಯಾವಾಗ ನೀಡಲಾಗುವುದು;

(ಇ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದ ಅಕ್ರಮದಲ್ಲಿ ಭಾಗಿಯಾಗಿರುವ ಐ.ಎ.ಎಸ್. ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಅಕ್ರಮವೆಸಗಲು ಐ.ಎ.ಎಸ್. ಅಧಿಕಾರಿಯ ಪುತ್ರನ ಬ್ಯಾಂಕ್ ಖಾತೆಗೆ 20 ಲಕ್ಷ ಪಾವತಿಸಲಾಗಿದೆ ಎಂಬುದರ ಕುರಿತು ಸರ್ಕಾರದ ನಿಲುವೇನು?